ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಗೌರಿಬಿದನೂರು ತಾಲ್ಲೂಕಿನಾದ್ಯಂತ ರೆವಿನ್ಯೂ ನಿವೇಶನದಲ್ಲಿ ಆಶ್ರಯ ಮನೆಗಳ ನಿರ್ಮಾಣ

2061(2182) ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್. (ಗೌರಿಬಿದನೂರು) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಾದ್ಯಂತ ಆಶ್ರಯ ಯೋಜನೆಯ ವತಿಯಿಂದ ಮನೆ ನಿರ್ಮಿಸಿಕೊಳ್ಳಲು ಅನುದಾನ ಮಂಜೂರು ಮಾಡಿಸಿಕೊಂಡು ರೆವಿನ್ಯೂ ನಿವೇಶನದಲ್ಲಿ ಮನೆ ನಿರ್ಮಾಣ ಮಾಡಿಕೊಂಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ಗ್ರಾಮವಾರು ವಿವರ ಒದಗಿಸುವುದು);

ಆ) ಹಾಗಿದ್ದರೆ, ರೆವಿನ್ಯೂ ನಿವೇಶನದಲ್ಲಿ ಆಶ್ರಯ, ಅಂಬೇಡ್ಕರ್, ಇಂದಿರಾ ಆವಾಸ್ ಯೋಜನೆಯ ಅನುದಾನವನ್ನು ಫಲಾನುಭವಿಗಳಿಗೆ ಮಂಜೂರು ಮಾಡಬಹುದೆ;

ಇ) ರೆವಿನ್ಯೂ ಗ್ರಾಮಠಾಣಾ ನಿವೇಶನ ಹೊಂದಿರುವ ಫಲಾನುಭವಿಗಳಿಗೂ ಸಹ ಆಶ್ರಯ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡಿ ಮನೆ ನಿರ್ಮಾಣ ಮಾಡಿಕೊಳ್ಳಲು ಅನುಮತಿಯನ್ನು ಒದಗಿಸಿಕೊಟ್ಟು ಈ ಭಾಗದ ನಿರ್ಗತಿಕರಿಗೆ ಮನೆ ನಿರ್ಮಿಸಿಕೊಳ್ಳಲು ಅನುಮತಿ ಒದಗಿಸಬಹುದೇ?

ಶ್ರೀ ಸಿ.ಆರ್. ಸಗೀರ್ ಅಹಮದ್ (ವಸತಿ ಸಚಿವರು):

ಅ) ಗ್ರಾಮೀಣ ಪ್ರದೇಶ : ಯಾರೂ ಇಲ್ಲ

ನಗರ ಪ್ರದೇಶ : 9 ಫಲಾನುಭವಿಗಳು

ಆ) ಮತ್ತು ಇ) ಕಾನೂನು ಪ್ರಕಾರ ಪಡೆದಿರುವ ಮನೆ ನಿವೇಶನವಿರುವ ಬಡವರಿಗೆ ಆಶ್ರಯ ವಸತಿ ಯೋಜನೆಯ ನಿಯಮಗಳಡಿಯಲ್ಲಿ ಅರ್ಹರಿದ್ದಲ್ಲಿ ಮನೆ ನೀಡಬಹುದು.

ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾರಂಭ

2062(2553) ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಗೌರಿ ಬಿದನೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ 16 ಪ್ರೌಢ ಶಾಲೆಗಳು (ಸರ್ಕಾರಿ) 15 ಖಾಸಗಿ ಪ್ರೌಢ ಶಾಲೆಗಳು ಇದ್ದು, ಈ ಪ್ರೌಢ ಶಾಲೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮುಂದಿನ ವ್ಯಾಸಂಗಕ್ಕೆ 15-18 ಕಿ.ಮೀ ದೂರಹೋಗಿ ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯವು ಇಲ್ಲದೆ ಇಲ್ಲಿನ ವಿದ್ಯಾರ್ಥಿನಿಯರು, ವಿದ್ಯಾರ್ಥಿಗಳು ಸರ್ಕಾರವನ್ನು ದೂಷಿಸುತ್ತಿರುವುದು ನಿಜವಲ್ಲವೇ;

ಇ) ಹಾಗಿದ್ದರೆ ಗೌರಿಬಿದನೂರು ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಸ್ಥಾಪನೆ ಮಾಡುವ ಪ್ರಸ್ತಾಪವು ಸರ್ಕಾರದ ಮುಂದಿದೆಯೇ; ಇದಕ್ಕೆ ತಗಲುವ ವೆಚ್ಚವೇನು?